ಯಲ್ಲಿನ ಗಾಯಾಳುಗಳಿಗೆ ಪ್ರಥಮ ದರ್ಜೆ ಚಿಕಿತ್ಸೆಗಳನ್ನು ಒದಗಿಸಲಾಗುತ್ತಿದೆ. ಆಯಾ ರೋಗಗಳಿಗೆ ಸಂಬಂಧಿಸಿದಂತೆ ರೋಗಿಗಳಿಗೆ ವೈದ್ಯರು ಮೌಖಿಕವಾಗಿ ಅಗತ್ಯ ಸೂಚನೆಗಳನ್ನು ನೀಡಿ, ಉಚಿತ ಅಗತ್ಯ ಔಷಧಗಳನ್ನು ನೀಡುವ ಉದ್ದೇಶವನ್ನು ಯೋಜನೆ ಹೊಂದಿದೆ. ಕೆಲವೊಂದು ಆರೋಗ್ಯ ಸೇವೆಗಳನ್ನು ಪ್ರಾಥಮಿಕ ಆರೋಗ್ಯ ಕೇಂದ್ರ ಹಂತ, ಉಪ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಿಗೂ ವಿಸ್ತರಿಸಲಾಗಿದೆ.

ಸಾಂಕ್ರಾಮಿಕ ರೋಗಗಳು ಕೇವಲ ಒಬ್ಬ ವ್ಯಕ್ತಿಗೆ ಮಾತ್ರವಲ್ಲದೆ ಇಡೀ ಸಮುದಾಯವನ್ನೇ ಪೀಡಿಸಬಲ್ಲದು. ಹಾಗಾಗಿ ಇವುಗಳ ಬಗ್ಗೆ ಜಾಗೃತಿ ಮೂಡಿಸುವುದು ಅತ್ಯವಶ್ಯಕ. ಆರಂಭ ಹಂತದಲ್ಲೇ ಅವುಗಳನ್ನು ಪತ್ತೆ ಮಾಡುವುದರಿಂದ, ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವುದರಿಂದ, ಪೌಷ್ಟಿಕ ಆಹಾರ ಮತ್ತು ನೈರ್ಮಲ್ಯ ಅಭ್ಯಾಸಗಳನ್ನು ರೂಢಿಸಿಕೊಳ್ಳುವುದರಿಂದ ಸಾಂಕ್ರಾಮಿಕ ರೋಗಗಳನ್ನು ಹದ್ದುಬಸ್ತಿನಲ್ಲಿಡಬಹುದು. ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳ ಪ್ರಮುಖ ಉದ್ದೇಶಗಳಲ್ಲಿ ಇದು ಒಂದಾಗಿದೆ. ಕಾಲರಾ, ಎಚ್1ಎನ್1, ಮಂಗನ ಕಾಯಿಲೆ, ವಿಷಮಶೀತ ಜ್ವರ, ನಾಯಿಕೆಮ್ಮು, ಡಿಫ್ತೀರಿಯಾ ಸೇರಿದಂತೆ ವಿವಿಧ ಸಾಂಕ್ರಾಮಿಕ ರೋಗಗಳು ಹರಡದಂತೆ ತಡೆಗಟ್ಟಲು ಕ್ರಮವಹಿಸುತ್ತಿವೆ.

### ಅಸಾಂಕ್ರಾಮಿಕ ರೋಗಗಳ ಬಗ್ಗೆ ಅರಿವು

ಬದಲಾದ ಜೀವನ ಶೈಲಿಯಿಂದ ಗ್ರಾಮೀಣ ಭಾಗದಲ್ಲೂ ರಕ್ತದೊತ್ತಡ, ಸಕ್ಕರೆ ಕಾಯಿಲೆ, ಕ್ಯಾನ್ಸರ್ ಇನ್ನಿತರ ಕಾಯಿಲೆಗಳು ಹೆಚ್ಚುತ್ತಿವೆ. ಈ ಬಗ್ಗೆ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳು ಅರಿವು ಮೂಡಿಸಲಿವೆ. ವಿಶ್ವದಲ್ಲಿ ಶೇ 63 ರಷ್ಟು ಮಂದಿ ಸಾಂಕ್ರಾಮಿಕವಲ್ಲದ ರೋಗಗಳಿಂದ ಸಾಯುತ್ತಿದ್ದಾರೆ ಎಂದು ಅಧ್ಯಯನಗಳು ದೃಢಪಡಿಸಿವೆ. ಮಧುಮೇಹ, ಅಧಿಕ ರಕ್ತದೊತ್ತಡ, ಹೃದಯ ತೊಂದರೆಗಳು, ಬೊಜ್ಜು ಸಮಸ್ಯೆಗಳು, ಶ್ವಾಸಕೋಶ ಸಮಸ್ಯೆ, ಆಸ್ಟಿಯೊ ಆರ್ಥೈಟಿಸ್ (ಕೀಲುನೋವು), ಪಿತ್ತಜನಕಾಂಗದ ತೊಂದರೆಗಳು ಹಾಗೂ ಕೆಲವು ಬಗೆಯ ಕ್ಯಾನ್ಸರ್‌ಗಳಿಗೆ ಅಸಮರ್ಪಕ ಜೀವನಶೈಲಿ ಕಾರಣವಾಗಬಹುದು. ಆಹಾರ ಕ್ರಮ ಮತ್ತು ದೈಹಿಕ ಚಟುವಟಿಕೆಗಳಲ್ಲಿ ಬದಲಾವಣೆಗಳೊಂದಿಗೆ ಆರೋಗ್ಯಕರ ಜೀವನಶೈಲಿ ಅಳವಡಿಸಿಕೊಳ್ಳುವುದರಿಂದ ಗಂಭೀರ ಸಮಸ್ಯೆಯಿಂದ ದೂರ ಇರಬಹುದು. ಈ ಬಗ್ಗೆ ಆರೋಗ್ಯ ಮತ್ತು ಕ್ಷೇಮ ಕೇಂದ್ರದಲ್ಲಿನ ವೈದ್ಯರು ಹಾಗೂ ಶುಶ್ರೂಷಕಿಯರು ಅಗತ್ಯ ಮಾರ್ಗದರ್ಶನ ನೀಡಲಿದ್ದಾರೆ.

ಅಸಮರ್ಪಕ ಜೀವನಶೈಲಿಯಿಂದ ಉಂಟಾಗುವ ಪ್ರಮುಖ ಸಮಸ್ಯೆ ಬೊಜ್ಜು. ಅದನ್ನು ಸಮರ್ಪಕವಾಗಿ ನಿಭಾಯಿಸದಿದ್ದರೆ ದೇಹದ ಇತರೇ ಅಂಗಾಂಗಗಳು ರೋಗ ಪೀಡಿತವಾಗುತ್ತವೆ. ಬಾಲ್ಯದಿಂದಲೇ ಆರೋಗ್ಯಕರ ಅಭ್ಯಾಸಗಳನ್ನು ಅಳವಡಿಸಿಕೊಳ್ಳುವುದು ಮುಖ್ಯ. ಅವುಗಳಲ್ಲಿ ಮನೆ ಮತ್ತು ಶಾಲೆಗಳಲ್ಲಿ ಆರೋಗ್ಯಕರ ರೀತಿಯ ಆಹಾರ ಸೇವನೆ, ನಿಗದಿತ ಹೊರಾಂಗಣ, ದೈಹಿಕ ಚಟುವಟಿಕೆಗಳು ಸೇರಿರುತ್ತವೆ. ಪ್ರತಿದಿನ ಕನಿಷ್ಠ 60 ನಿಮಿಷಗಳ ಕಾಲ ಆಟವಾಡುವ ಅಥವಾ ಕ್ರೀಡೆಯಲ್ಲಿ ತೊಡಗಬೇಕು. ಈ ಬಗ್ಗೆ ಎಲ್ಲ ವಯೋಮಾನದವರೂ ಮಾಹಿತಿ ಪಡೆದು, ಆರೋಗ್ಯ ಜೀವನವನ್ನು ನಡೆಸಲು ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳು ಸಹಾಯಕ್ಕೆ ಬರಲಿವೆ.

ಕ್ಯಾನ್ಸರ್ ಸೇರಿದಂತೆ ವಿವಿಧ ಗಂಭೀರ ಕಾಯಿಲೆಗಳನ್ನು ಮೊದಲ ಹಂತದಲ್ಲಿಯೇ ಪತ್ತೆ ಮಾಡಿದಲ್ಲಿ ಸುಲಭವಾಗಿ ಗುಣಪಡಿಸಬಹುದು. ಇದರಿಂದ ರೋಗಿ ಹಾಗೂ ಆತನ ಕುಟುಂಬ ಆರ್ಥಿಕ ಸಂಕಷ್ಟಕ್ಕೆ ಸಿಲುಕುವುದು ತಪ್ಪಲಿದೆ. ಈ ನಿಟ್ಟಿನಲ್ಲಿ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ರೋಗ ಲಕ್ಷಣಗಳನ್ನು ಗುರುತಿಸಿ, ಚಿಕಿತ್ಸೆ ನೀಡಲಾಗುತ್ತದೆ. ಹೆಚ್ಚಿನ ಚಿಕಿತ್ಸೆ ಅಗತ್ಯವಿದ್ದಲ್ಲಿ ಮೇಲ್ದರ್ಜೆಯ ಆಸ್ಪತ್ರೆಗಳಿಗೆ ಶಿಫಾರಸು ಮಾಡಲಾಗುತ್ತದೆ. ಇದರಿಂದಾಗಿ ರೋಗಗಳಿಂದ ಮರಣ ಹೊಂದುವವರ ಸಂಖ್ಯೆಯಲ್ಲಿ ಗಣನೀಯ ಇಳಿಕೆಯಾಗಲಿದೆ.

- ಆರೋಗ್ಯ ಕ್ಷೇಮ ಕೇಂದ್ರಗಳಲ್ಲಿ ಸಿಗುವ ಪ್ರಮುಖ ಸೇವೆಗಳು.
- ತಾಯಿ ಆರೋಗ್ಯ – ಗರ್ಭಿಣಿ ಹಾಗೂ ಬಾಣಂತಿ ಸೇವೆಗಳು.
- ನವಜಾತ ಶಿಶು ಆರೈಕೆ ಹಾಗೂ ಚುಚ್ಚು ಮದ್ದು ಸೇವೆಗಳು.
- ಮಕ್ಕಳ ಹಾಗೂ ಅಧಿಯರೆಯದವರಿಗೆ ನೀಡುವ ಆರೋಗ್ಯ ಸೇವೆಗಳು.

